ಕರ್ನಾಟಕ ಸರ್ಕಾರ
(ವಾಣಿಜ್ಯ ತೆರಿಗೆ ಇಲಾಖೆ)

**ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರವರ ಕಛೇರಿ,(ಆಡಳಿತ), ವಿಭಾಗೀಯ ಸರಕು ಮತ್ತು ತೆರಿಗೆ ಕಛೇರಿ-04, ವಾಣಿಜ್ಯ ತೆರಿಗೆಗಳ ಕಾರ್ಯಾಲಯ-02, 4ನೇ ಮಹಡಿ, ಎ ಬ್ಲಾಕ್, ಕೊಠಡಿ ಸಂಖ್ಯೆ:401, ಕೋರಮಂಗಲ, ಬೆಂಗಳೂರು-560047 ದೂರವಾಣಿ ಸಂಖ್ಯೆ:080-25704799.**

ಸಂ.ವಾತೆಜಂಆ(ಆ)4/ವಿ.ಸ&ಸೇ.ಕ-4/ವಾಹನ/ಸಿಆರ್-9/2022-23 ದಿನಾಂಕ:06.08.2022.

## ಟೆಂಡರ್ ಅಧಿಸೂಚನೆ

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರ ಕಛೇರಿ(ಆಡಳಿತ) ವಿಭಾಗೀಯ ಸರಕು ಸೇವಾ ತೆರಿಗೆ ಕಛೇರಿ-04, ಕೋರಮಂಗಲ, ಬೆಂಗಳೂರು ರವರ ಕಛೇರಿಯ ಕಾರ್ಯಾವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು 2017ರಲ್ಲಿ ತಯಾರಾದ ಮತ್ತು ನಂತರದ ವರ್ಷಗಳ ಮಾದರಿಯ 13 (ಹದಿಮೂರು) ಸಂಖ್ಯೆ ಮಾಲೀಕರೆ ಚಾಲಕರಾಗಿರುವ ಖಾಸಗಿ ವಾಹನಗಳಿಗೆ ಟೆಂಡರ್ ಕರೆಯಲಾಗಿದೆ. ಅಗತ್ಯವಿರುವ ವಾಹನಗಳ ಸಂಖ್ಯೆ ಬೆಂಗಳೂರು ಕಛೇರಿಗೆ-12 ವಾಹನ, ಕೋಲಾರ ಕಛೇರಿಗೆ-01 ವಾಹನ.

ಟೆಂಡರಿನ ನಿಬಂಧನೆಗಳು, ಷರತ್ತುಗಳು, ನಮೂನೆ ಮತ್ತು ಇತರೆ ವಿವರಗಳನ್ನು ಮೇಲ್ಕಂಡ ವಿಳಾಸದಲ್ಲಿನ ಸೂಚನಾ ಫಲಕದಲ್ಲಿ ಹಾಗೂ ಇಲಾಖೆಯ ಜಾಲತಾಣದಲ್ಲಿ ಪರಿಶೀಲಿಸಬಹುದಾಗಿದೆ. **ಟೆಂಡರನ್ನು ಸಲ್ಲಿಸಲು ಕೊನೆಯ ದಿನಾಂಕ:22.08.2022.** ಹೆಚ್ಚಿನ ವಿವರಗಳಿಗಾಗಿ ಸಹಾಯಪೀಠದ ದೂರವಾಣಿ ಸಂಖ್ಯೆ:080.25704799 ರಲ್ಲಿ ಸಂಪರ್ಕಿಸಬಹುದು.

6/8/22

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು(ಆಡಳಿತ)
ವಿ.ಸ.ಸೇ.ತೆ.ಕ-04, ಬೆಂಗಳೂರು
ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ)
ವಿ.ಸ. & ಸೇ.ತೆ.ಕ-4, ಬೆಂಗಳೂರು - 560 047

Joint Commissioner of Commercial Taxes
Bangalore - 47
(Admn) DGSTO-4

ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ
ವಾಣಿಜ್ಯ ತೆರಿಗೆಗಳ ಇಲಾಖೆ

ಸಂ:ವಾ.ತೆ.ಜಂ.ಆ(ಆ)ವಿ.ಸ.ಸೇ.ತೆ.ಕ-4/ವಾಹನ/ಸಿಆರ್-9/2022-23

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು,(ಆಡಳಿತ)
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4
ರಾಜೇಂದ್ರ ನಗರ, ಕೋರಮಂಗಲ, ಬೆಂಗಳೂರು-560047.

ದೂ:080-25704833, **ದಿನಾಂಕ: 6.08.2022.**

## ಪ್ರಕಟಣೆ

**ವಿಷಯ:-** ದಿನಾಂಕ: 01.09.2022 ರಿಂದ ದಿನಾಂಕ: 31.03.2023ರ ಅವಧಿಗೆ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು,(ಆಡಳಿತ), ಕೋರಮಂಗಲ, ಬೆಂಗಳೂರು, ಈ ಕಛೇರಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

**ಉಲ್ಲೇಖ:-** 1) ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಸುತ್ತೋಲೆ ಸಂ.ವಿಹೆಚ್‌ಟಿ/ಸಿಆರ್-15/2022-23, ದಿನಾಂಕ: 01.08.2022.
2) ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಪತ್ರ ಸಂಖ್ಯೆ: ವಿಹೆಚ್‌ಟಿ/ಸಿ.ಆರ್-22/2019-20, ದಿನಾಂಕ: 27.04.2022.

*********

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ಕೋರಮಂಗಲ, ಬೆಂಗಳೂರು ಇವರ ಕಛೇರಿಯ ಉಪಯೋಗಕ್ಕಾಗಿ 13 (ಹದಿಮೂರು) ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖದಲ್ಲಿ ತಿಳಿಸಿರುವ ಮಾನ್ಯ ಆಯುಕ್ತರ ಪತ್ರದಲ್ಲಿ ಅನುಮತಿಸಿರುವುದರಿಂದ, ಮಾಲೀಕ ಚಾಲಕರಾಗಿರುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಒಬ್ಬ ವಾಹನ ಮಾಲೀಕ/ಚಾಲಕರು ಒಂದು ವಾಹನ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 96 ಶಿವಾನೀ 2012, ದಿ:23.08.2012 ರಲ್ಲಿ ತಿಳಿಸಿರುವ ನಿಯಮಗಳನ್ವಯ ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಸರ್ಕಾರದ ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ ಆಇ 156 ವೆಚ್ಚ-12/2019, ದಿನಾಂಕ:22.03.2022ರ ಅನ್ವಯ ವಾಹನಗಳ ಬಾಡಿಗೆ ತಿಂಗಳಿಗೆ ಮೊತ್ತ ರೂ. 35,000-00 ನೀಡಲಾಗುವುದು.

2. ವಾಹನದ ಮಾದರಿಯು 2017ರಲ್ಲಿ ತಯಾರಾದ ಮತ್ತು ನಂತರದಾಗಿರತಕ್ಕದ್ದು, ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲನಾ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುವುದು.

3. ದಿ:01.10.2018 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ 5 ವರ್ಷಗಳ ಕಾಲ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ ಮಾಲಿಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಅರ್ಜಿಗಳನ್ನು ಪರಿಗಣಿಸಿರುವುದಿಲ್ಲ.

4. ಗುತ್ತಿಗೆಯ ಅವಧಿ ದಿನಾಂಕ: **01-09-2022** ರಿಂದ **31-03-2023** ರವರೆಗೆ.

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: **22.08.2022** ಸಂಜೆ **5.00** ಘಂಟೆಯವರೆಗೆ ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅರ್ಹಗೊಂಡ ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕ/ಚಾಲಕರ ವಿವರವನ್ನು ಇಲಾಖೆಯ ಸೂಚನ ಫಲಕ ಹಾಗೂ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

**ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು:**

| | |
|---|---|
| 1 | ಅರ್ಜಿದಾರರ ಹೆಸರು, ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು–2 |
| 2 | ವಿಳಾಸದ ದಾಖಲೆ (ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಆಧಾರ್ ಕಾರ್ಡ್/ಪಾಸ್‌ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊದಿರುವ ಗುರುತಿನ ಚೀಟಿ ಹಾಗೂ ಖಾಯಂ ವಿಳಾಸದ ದಾಖಲೆ, ಬ್ಯಾಂಕ್ ಖಾತೆಯ ವಿವರಗಳು/ಚೆಕ್ಕಿನ ಪ್ರತಿ. |
| 3 | ವಾಹನದ ನೊಂದಣಿ ಪುಸ್ತಕದ ಪ್ರತಿ– ಪ್ರಮಾಣ ಪತ್ರ |
| 4 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನದ ವಿಮಾ ಪಾಲಿಸಿಯ ಪ್ರತಿ |
| 5 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ |
| 6 | ರೋಡ್ ತೆರಿಗೆ ಪಾವತಿಸಿರುವ ವಿವರ |
| 7 | ಮಾಲೀಕರಿಗೆ ಸಂಬಂಧಿಸಿದಂತೆ ಡ್ರೈವಿಂಗ್ ಲೈಸೆನ್ಸ್ ಚಾಲಕರ ದೈಹಿಕ ಸಾಮರ್ಥ ಪ್ರಮಾಣ ಪತ್ರ |
| 8 | ಪಾನ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ನಮೂದಿಸತಕ್ಕದ್ದು. |
| 9 | ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು, ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಖಾಸಗಿ ವಾಹನ ಚಾಲಕರ/ಮಾಲೀಕರ ಹೊರಗುತ್ತಿಗೆ ಸೇವೆ ಸಲ್ಲಿಸಲು ಅರ್ಜಿ ಎಂದು ನಮೂದಿಸುವುದು |
| 10 | ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 11 | ಅರ್ಜಿಗಳನ್ನು ಖುದ್ದಾಗಿ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು,(ಆಡಳಿತ), ವಿ.ಸ&ಸೇ.ತೆ.ಕ–4, ವಿ.ಟಿ.ಕೆ–2, 4ನೇ ಮಹಡಿ, 'ಎ' ಬ್ಲಾಕ್, ಕೊಠಡಿ ಸಂಖ್ಯೆ. 401, ಕೋರಮಂಗಲ, ಬೆಂಗಳೂರು, ಇವರ ಶಾಖೆಯಲ್ಲಿ ಸಲ್ಲಿಸುವುದು ಹಾಗೂ ಅರ್ಜಿಗಳ ಸ್ವೀಕೃತಿ ಅನುಸಾರವಾಗಿ ಕ್ರಮ ಸಂಖ್ಯೆ ನೀಡಲಾಗುವುದು. |
| 12 | ಅರ್ಜಿಗಳನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿ ಅನ್ವಯ ಕಡ್ಡಾಯವಾಗಿ ನಿಯಮಗಳನ್ನು ಅರ್ಹಗೊಳ್ಳುವ ವಾಹನ ಮಾಲೀಕ/ಚಾಲಕರು ಕಡ್ಡಾಯವಾಗಿ ಪಾಲಿಸತಕ್ಕದ್ದು. |
| 13 | ಅರ್ಹಗೊಂಡ ಅರ್ಜಿದಾರರ ವಿವರಗಳ ಪಟ್ಟಿಯ ಪ್ರಕಟಣೆ ದಿನಾಂಕ: 26–08–2022. |

**ಷರತ್ತು ಮತ್ತು ನಿಬಂಧನೆಗಳು**

| | |
|---|---|
| 01 | ಅನಾರೋಗ್ಯವೂ ಸೇರಿದಂತೆ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಒಂದು ತಿಂಗಳಲ್ಲಿ ಎರಡು ದಿನ ಮಾತ್ರ ವಾಹನ ಉಪಯೋಗಿಸುವ ಕಛೇರಿಯ ಅಧಿಕಾರಿಯವರಿಂದ ಅನುಮತಿ ಪಡೆದು, ಮಾಲೀಕ–ಚಾಲಕರು ರಜೆ ಪಡೆಯಬಹುದು. ಆ ಅವಧಿಯಲ್ಲಿ ಬದಲಿ ವಾಹನದ ವ್ಯವಸ್ಥೆ ಕಡ್ಡಾಯವಾಗಿ ಮಾಡಲೇಬೇಕು. ಇಲ್ಲದಿದ್ದರೆ ಗೈರುಹಾಜರಿ ದಿವಸದ ಬಾಡಿಗೆ ಕಡಿತಗೊಳಿಸಲಾಗುವುದು. |
| 02 | ಮಾಸಿಕ ಬಾಡಿಗೆ ಆಧಾರದ ಮೇಲೆ ಹಾಗೂ ಕರಾರಿನಂತೆ ದರಗಳಿಗೆ ಒಳಪಟ್ಟು ಮಾತ್ರ ವಾಹನಗಳನ್ನು ಬಾಡಿಗೆಗೆ ಪಡೆಯಲಾಗುತ್ತದೆ. |
| 03 | ಮಾಲೀಕ–ಚಾಲಕರು ಕಟ್ಟುನಿಟ್ಟಾಗಿ ಸಮಯಪಾಲನೆ ಮಾಡತಕ್ಕದ್ದು, ಕರ್ತವ್ಯದ ಸಮಯದಲ್ಲಿ ಕಡ್ಡಾಯವಾಗಿ |

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ)
ವಿ.ಸ. & ಸೇ.ತೆ.ಕ–4, ಬೆಂಗಳೂರು – 560 047

| | |
|---|---|
| | ಸಮವಸ್ತ್ರವನ್ನು ಧರಿಸಬೇಕು. ವಾಹನದ ಬಳಕೆಯನ್ನು ನಿಲ್ಲಿಸುವ, ಒಪ್ಪಂದವನ್ನು ರದ್ದುಪಡಿಸುವ ಅಧಿಕಾರ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರವರದ್ದಾಗಿರುತ್ತದೆ. |
| 04 | ಇಲಾಖೆಯ ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸುವ ಪ್ರತಿ ವಾಹನಕ್ಕೆ ಸಂಬಂಧಿಸಿದಂತೆ ನಿಗಧಿತ ಲಾಗ್ ಪುಸ್ತಕವನ್ನು ನಿರ್ವಹಿಸಿ ಪ್ರತಿ ದಿನದ ಆರಂಭ ಮತ್ತು ಅಂತ್ಯದವರೆಗಿನ ವಾಹನ ಓಡಾಟದ ಸಂಬಂಧ ಈ ಪುಸ್ತಕದಲ್ಲಿ ಅಗತ್ಯ ದಾಖಲೆಗಳನ್ನು ನಮೂದಿಸಿ ವಾಹನವನ್ನು ಉಪಯೋಗಿಸಿದ ಅಧಿಕಾರಿಯವರಿಂದ ರುಜು ಪಡೆಯತಕ್ಕದ್ದು. |
| 05 | ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸುವ ವಾಹನ ಓಡಾಟಕ್ಕೆ ಸಂಬಂಧಿಸಿದಂತೆ ಆಯಾ ದಿನದ ಆರಂಭಿಕ ಮತ್ತು ಅಂತಿಮ ಸಮಯದ ಗಣನೆ ಮತ್ತು ಕಿಲೋಮೀಟರ್‌ನ ಗಣನೆಯು ಆಯಾ ಕಛೇರಿಯ ಆವರಣದಿಂದ ಕಛೇರಿ ಕಾರ್ಯದ ನಿಮಿತ್ತ ಆ ವಾಹನ ಹೊರಡುವ ಕ್ಷಣದಿಂದ ಪ್ರಾರಂಭವಾಗುತ್ತದೆ ಹಾಗೂ ಆ ದಿನದ ಕಾರ್ಯ ಮುಗಿದ ಮೇಲೆ ಅದೇ ಸ್ಥಳದಲ್ಲಿ ಕೊನೆಗೊಳ್ಳುತ್ತದೆ. |
| 06 | ಯಾವುದೇ ತಿಂಗಳಿನ ವಾಹನ ಬಾಡಿಗೆ ಹಣವನ್ನು ಅದರ ಮುಂದಿನ ತಿಂಗಳು ವಾಹನ ಮಾಲೀಕರು ಸಲ್ಲಿಸುವ ಬಿಲ್ಲಿನ ಆಧಾರದ ಮೇಲೆ ಪಾವತಿಸಲಾಗುವುದು. ಇಲಾಖೆಗೆ ಬಾಡಿಗೆ ಹಣದ ಬಿಲ್ಲನ್ನು ಸಂಬಂಧಿಸಿದ ವಾಹನದ ಲಾಗ್ ಪುಸ್ತಕದ ಕಛೇರಿ ಮುಖ್ಯಸ್ಥರಿಂದ ದೃಢೀಕೃತವಾದ ನಕಲು ಪ್ರತಿ ಮತ್ತು ವಾಹನ ಉಪಯೋಗಿಸಿದ ಕಛೇರಿಯ ಮುಖ್ಯಸ್ಥರ ಸೂಕ್ತ ಪ್ರಮಾಣಪತ್ರದ ಜೊತೆ ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಸಲ್ಲಿಸತಕ್ಕದ್ದು. |
| 07 | ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಈ ಇಲಾಖೆಗೆ ಒದಗಿಸುವ ಕಾಲಮಿತಿಯು ಆರಂಭದಲ್ಲಿ ದಿನಾಂಕ:01-09-2022 ರಿಂದ 31-03-2023 ರವರೆಗೆ ಇರುತ್ತದೆ. ಅಗತ್ಯವಿದ್ದರೆ ಇವೇ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಅಥವಾ ಇನ್ನೂ ಹೆಚ್ಚಿನ ಷರತ್ತುಗಳ ಜೊತೆಗೆ ಮತ್ತೊಂದು ವರ್ಷದ ಅಥವಾ ಒಂದು ತ್ರೈಮಾಸಿಕದ ಅವಧಿಗೆ ವಾಹನ ಮಾಲೀಕರು ಮತ್ತು ಈ ಇಲಾಖೆಯ ಆಯುಕ್ತರ ಲಿಖಿತ ಇಚ್ಛೆಯ ಮೇರೆಗೆ ಮುಂದುವರಿಸಬಹುದಾಗಿದೆ. ಇದಕ್ಕೂ ಮೊದಲು ಸಹ ಕರಾರು ರದ್ದುಗೊಳಿಸುವ ಹಕ್ಕು ಆಯುಕ್ತರು/ಜಂಟಿ ಆಯುಕ್ತರವರದ್ದಾಗಿರುತ್ತದೆ. ಅಲ್ಲದೆ ಅವಧಿಗೆ ಮುನ್ನಾ ಮೇಲ್ಕಂಡ ಕರಾರನ್ನು ರದ್ದುಗೊಳಿಸುವ ವಾಣಿಜ್ಯ ತೆರಿಗೆ ಆಯುಕ್ತರಿಗೆ/ಜಂಟಿ ಆಯುಕ್ತರಿಗೆ ಇರುತ್ತದೆ. |
| 08 | ವಾಹನವನ್ನು ಸರಕಾರಿ ಕೆಲಸಕ್ಕೆ ಉಪಯೋಗಿಸುವಾಗ "ಸರಕಾರಿ ಕೆಲಸದ ಮೇಲೆ" ಅಥವಾ "ಕರ್ನಾಟಕ ಸರ್ಕಾರದ ಸೇವೆಯಲ್ಲಿ" ಎಂಬ ಫಲಕವಿರಬೇಕು. ಪಾರ್ಕಿಂಗ್ ಶುಲ್ಕ ಇತ್ಯಾದಿ ವಾಹನ ಮಾಲೀಕರೇ ಭರಿಸತಕ್ಕದ್ದು. |
| 09 | ವಾಹನದ ಯಾವುದೇ ಕಾನೂನು ಉಲ್ಲಂಘನೆಗೆ ಸ್ವತಃ ಮಾಲೀಕ/ಚಾಲಕರೇ/ಟ್ರಾವೆಲ್ ಏಜನ್ಸೀಸ್/ಸಂಸ್ಥೆಯವರೇ ಜವಾಬ್ದಾರರಾಗಿರುತ್ತಾರೆ. |
| 10 | ವಾಹನವನ್ನು ಕಛೇರಿಯ ಕೆಲಸಕ್ಕೆ ಉಪಯೋಗಿಸಿದ ನಂತರ ಸಂಬಂಧಪಟ್ಟ ಅಧಿಕಾರಿಗಳಿಂದ ಕಾಲಕಾಲಕ್ಕೆ ಸರಿಯಾಗಿ ಉಪಯೋಗಿಸಿದ ವಿವರದೊಂದಿಗೆ ಟ್ರಿಪ್ ಶೀಟ್‌ನಲ್ಲಿ ಭರ್ತಿ ಮಾಡಿ ಸಹಿ ಮಾಡುವುದು. |
| 11 | ಈ ಇಲಾಖೆಗೆ ಹೊರ ಗುತ್ತಿಗೆ ಆಧಾರದ ಮೇಲೆ ವಾಹನವನ್ನು ಪಡೆದಿರುವಂತಹ ಅವಧಿಯಲ್ಲಿ ಬೇರೆ ಯಾವುದೇ ಇಲಾಖೆಯಲ್ಲಿ ಅಥವಾ ಖಾಸಗಿ ಸಂಸ್ಥೆಯಲ್ಲಿ ಅಥವಾ ಬೇರೆ ಇನ್ನಾವುದೇ ಕೆಲಸಗಳಿಗೆ ವಾಹನವನ್ನು ಉಪಯೋಗಿಸುವಂತಿಲ್ಲ. ಹಾಗೂ ವಾಹನವನ್ನು ಪೂರ್ಣವಾಗಿ "ವಾಣಿಜ್ಯ ತೆರಿಗೆ ಇಲಾಖಾ ಸೇವೆಗಾಗಿ" ಮೀಸಲಿಡತಕ್ಕದ್ದು. |
| 12 | ಈ ಭಾಗದ ಅಧಿಕಾರಿಗಳು ರಜೆ/ಅನ್ಯ ಸೇವೆ/ಇನ್ಯಾವುದೇ ಕಚೇರಿ ಕಾರ್ಯ ನಿಮಿತ್ತ ಕಚೇರಿಯಿಂದ ಹೊರಗೆ ತೆರಳಿದ ಸಂದರ್ಭದಲ್ಲಿ ಅವರಿಗೆ ಸಂಬಂಧಿಸಿದ ವಾಹನ ಚಾಲಕರು ಆ ದಿನ ಪೂರ್ವಾಹ್ನ 10-00 ಗಂಟೆಗೆ ಕಡ್ಡಾಯವಾಗಿ ಪತ್ರಾಂಕಿತ ವ್ಯವಸ್ಥಾಪಕರ ಬಳಿ ವರದಿ ಮಾಡಿಕೊಂಡು ಕಚೇರಿ ಆವರಣದಲ್ಲಿಯೇ ವಾಹನದೊಂದಿಗೆ ಇರತಕ್ಕದ್ದು. ಇಲ್ಲದಿದ್ದ ಪಕ್ಷದಲ್ಲಿ ಗೈರು ಹಾಜರು ಎಂದು ಪರಿಗಣಿಸಿ ಆ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು. |
| 13 | ಖಾಸಗಿ ವಾಹನ ಮಾಲೀಕರು/ಚಾಲಕರು/ಟ್ರಾವಲ್ ಏಜನ್ಸೀಸ್/ಸಂಸ್ಥೆಯವರ ಮಾಸಿಕ ಬಾಡಿಗೆಗೆ ಸಂಬಂಧಿಸಿದಂತೆ ಈ ಕಛೇರಿಗೆ ಬಿಲ್ಲುಗಳನ್ನು ಸಲ್ಲಿಸುವಾಗ ಮಾಹೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಗಳು, ಒಟ್ಟು ಓಡಿಸಿದ |

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ)
ವಿ.ಸ. & ಸೇ.ತೆ.ಕ-4, ಬೆಂಗಳೂರು - 560 047

| | |
|---|---|
| | ಕಿಲೋಮೀಟರ್ ಮತ್ತು ಸಮಯಕ್ಕೆ ಸಂಬಂದಿಸಿದಂತೆ ದೃಢೀಕೃತ ಪ್ರಮಾಣ ಪತ್ರವನ್ನು ಅಧಿಕಾರಿಗಳಿಂದ ಪಡೆದು ಬಿಲ್ಲಿನ ಜೊತೆ ಸಲ್ಲಿಸುವುದು. |
| 14 | ಮೇಲಿನ ಷರತ್ತು ಮತ್ತು ನಿಬಂಧನೆಗಳನ್ನು ಪಾಲಿಸದಿರುವುದು ಮತ್ತು ನಿರ್ಲಕ್ಷಿಸಿರುವುದು ಕಂಡುಬಂದಲ್ಲಿ ಯಾವುದೇ ಸೂಚನೆ ನೀಡದೆ ಹೊರಗುತ್ತಿಗೆ ಆಧಾರದ ಕರಾರನ್ನು ರದ್ದುಪಡಿಸಲಾಗುವುದು. |
| 15 | ಏಜನ್ಸಿ/ಸಂಸ್ಥೆಯು ಚಾಲಕರಿಗೆ ಪ್ರತಿ ತಿಂಗಳು ನೀಡಬೇಕಾದ ಕನಿಷ್ಠ ವೇತನ ಮತ್ತು ಇತರೆ ಹಣಕಾಸಿನ ಹೊಣೆಗಾರಿಕೆಗೆ ಬದ್ಧವಾಗಿರತಕ್ಕದ್ದು ಮತ್ತು ಚಾಲಕರಿಗೆ ನೀಡಬೇಕಾದ ಇ.ಎಸ್.ಐ ಹಾಗೂ ಇ.ಪಿ.ಎಫ್‌ಗಳನ್ನು ಸಂಸ್ಥೆಯಿಂದ ಪಾವತಿಸಿದ ಬಗ್ಗೆ ಚಲನ್‌ಗಳನ್ನು ಪ್ರತಿ ತಿಂಗಳ ಮೊದಲ ವಾರದಲ್ಲಿ ಕಛೇರಿಗೆ ಸಲ್ಲಿಸತಕ್ಕದ್ದು. |
| 16 | **ವಾಹನ ಚಾಲಕರು ಒಂದು ವೇಳೆ ಕರಾರು ಒಪ್ಪಂದವನ್ನು ರದ್ದುಪಡಿಸಬೇಕಾದರೆ, ಒಂದು ತಿಂಗಳು ಮುಂಚಿತವಾಗಿ ಈ ಕಛೇರಿಗೆ ಲಿಖಿತ ಮೂಲಕ ತಿಳಿಸಬೇಕು. ತಪ್ಪಿದ್ದಲ್ಲಿ ಒಂದು ತಿಂಗಳ ವಾಹನದ ಬಾಡಿಗೆ ಮೊತ್ತವನ್ನು ನೀಡುವುದಿಲ್ಲ ಹಾಗೂ ಇದಕ್ಕೂ ಮೊದಲು ಸಹ ಕರಾರು ರದ್ದುಗೊಳಿಸುವ ಹಕ್ಕು ಆಯುಕ್ತರು/ಅಪರ ಆಯುಕ್ತರವರದ್ದಾಗಿರುತ್ತದೆ.** |
| 17 | ಯಾವುದೇ ಸೂಚನೆ ನೀಡದೆ ಟೆಂಡರ್ ತಿರಸ್ಕರಿಸುವ ಮತ್ತು ಪಡೆಯುವ ಹಕ್ಕು ವಾಣಿಜ್ಯ ತೆರಿಗೆ ಆಯುಕ್ತರಿಗೆ/ಜಂಟಿ ಆಯುಕ್ತರಿಗೆ ಇರುತ್ತದೆ. |

6/8/22

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು,
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4
ಬೆಂಗಳೂರು.

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ)
ವಿ.ಸ. & ಸೇ.ತೆ.ಕ-4, ಬೆಂಗಳೂರು - 560 047

ಪ್ರತಿಗಳನ್ನು:-

1. ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಆಡಳಿತ) ಡಿವಿಒ-01, 02, 03, 05, ಮತ್ತು 06, ಬೆಂಗಳೂರು, ಸದರಿ ಪ್ರಕಟಣೆಯನ್ನು ಸೂಚನಾ ಪಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
3. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು (ಕೇಂದ್ರ) ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು, ಸಂಚಲನ, ಬೆಂಗಳೂರು ಇವರಿಗೆ ಸದರಿ ಪ್ರಕಟಣೆಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
5 ಸಾರ್ವಜನಿಕ ಮಾಹಿತಿಗಾಗಿ ಸೂಚನಾ ಫಲಕಕ್ಕೆ.
6 ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು, ಗಣಕಯಂತ್ರ, ಬೆಂಗಳೂರು ಇವರಿಗೆ ಸದರಿ ಪತ್ರವನ್ನು ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಲಾಗಿದೆ.
7. ಕಛೇರಿಯ ಕಡತಕ್ಕೆ.